**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ. 954/2023.**

| | | |
|---|---|---|
| ಸಾಕ್ಷಿದಾರರ ಹೆಸರು | : ಸುಜಾತ ಬಾಲಕೃಷ್ಣ | ಪ್ರಾಸಾ -12 |
| ಗಂಡ ಹೆಸರು | : ಕೆ ಕೆ ಬಾಲಕೃಷ್ಣ | ಚಾಸಾ-15 |
| ವಯಸ್ಸು | : 49 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಗೃಹಿಣಿ . | ದಿನಾಂಕಃ 14.07.2025 |
| ವಾಸಸ್ಥಳ | : ಕಳಸ . | |

**:ಮುಖ್ಯ ವಿಚಾರಣೆ ಪ್ರಾಜ್ಞ್ಯಾಸ.ಸ.ಅ. ರವರಿಂದ:**

ನ್ಯಾಯಾಲಯದ ಮುಂದೆ ಇರುವ ಆರೋಪಿಯ ಪರಿಚಯ ನನಗೆ ಇಲ್ಲ. ಚಾಸಾ-16 ರವರ ಪರಿಚಯ ನನಗೆ ಇದೆ.

ನಾನು ಕಳಸದ ಶ್ರೀ ಅನ್ನಪೂರ್ಣೇಶ್ವರಿ ಟ್ರಾನ್ಸ್ ಪೋರ್ಟ್ ಎಂಬ ಕಂಪನಿಯನ್ನು 25 ವರ್ಷ ಗಳಿಂದ ನಡೆಸುತ್ತಿರುತ್ತೇನೆ. ನಾನು ನಡೆಸುತ್ತಿದ್ದ ಟ್ರಾನ್ಸ್ ಪೋರ್ಟ್ ಕಂಪನಿಯ ಒಂದು ಬಸ್ಸಿನ ಅಪಘಾತದ ಕುರಿತು ಪೊಲೀಸರು ನನ್ನ ಬಳಿ ಒಂದುದಾಖಲಾತಿಗೆ ಸಹಿ ಪಡೆದಿರುತ್ತಾರೆ. ಇದನ್ನು ಹೊರತುಪಡಿಸಿ ನನಗೆ ಯಾವುದೇ ವಿಷಯ ತಿಳಿದಿರುವುದಿಲ್ಲ.

ನಿಪಿ-28 ಮತ್ತು 29 ರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು ಅವುಗಳನ್ನುಕ್ರಮವಾಗಿ ನಿಪಿ.28(ಬಿ) ಮತ್ತು 29 (ಬಿ) ಎಂದು ಗುರುತಿಸಲಾಯಿತು. ನಿಪಿ.8 ಮತ್ತು 9 ರಲ್ಲಿ ಕಾಣುತ್ತಿರುವ ಬಸ್ಸು ನನಗೆ ಸೇರಿದ್ದಾಗಿರುತ್ತದೆ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಪ್ರಾಜ್ಞ್ಯಾಸ.ಸ.ಅ. ರವರಿಂದ:**

ನ್ಯಾಯಾಲಯದ ಮುಂದೆ ಇರುವ ಆರೋಪಿ ನಮ್ಮ ಟ್ರಾನ್ಸ್ ಪೋಟ್ ಕಂಪನಿಯಲ್ಲಿ ಚಾಲಕನಾಗಿ ಕಾರ್ಯ ನಿರ್ವಹಿಸುತ್ತಿರಬಹುದು. ಸದರಿ ಆರೋಪಿಯನ್ನು ದಿನಾಂಕ 27.05.2023 ರಂದು ಕೆ ಎ 18-ಬಿ-1449 ಎಂಬ ಖಾಸಗಿ ವಾಹನದ ಚಾಲಕನಾಗಿ ನೇಮಕ ಮಾಡಿರುವ ಬಗ್ಗೆ ನನಗೆ ತಿಳಿದಿರುವುದಿಲ್ಲ. ಸದರಿ ವಾಹನವು ಆ ದಿನ ಮಾವಿನಕೆರೆ ಗ್ರಾಮದ ಕಲ್ಮಕ್ಕಿ ಬಳಿಯ ರಸ್ತೆಯಲ್ಲಿ ಅಪಘಾತಕ್ಕೀಡಾಗಿ, ಸದರಿ ಅಪಘಾತದಿಂದ ಆಂತೋಣಿ ಮತಾಯಿಸ್ ಎಂಬುವವರು ಮೃತ ಹೊಂದಿರುವ ಬಗ್ಗೆ ಪ್ರಕರಣ ದಾಖಲಾಗಿರುವ ಅನ್ನು ಕೇಳಿ ತಿಳಿದುಕೊಂಡಿರುತ್ತೇನೆ. ಈ ದಿನ ನ್ಯಾಯಾಲಯದ ಮುಂದೆ ಇರುವ ಆರೋಪಿಯು ಸದರಿ ವಾಹನದ ಅತೀ ವೇಗ ಮತ್ತು ಅಜಾಗರೂಕತೆಯಿಂದ ಚಲಾಯಿಸಿ ಅಪಘಾತಕ್ಕೀಡು ಮಾಡಿರುವ ಬಗ್ಗೆ ನನಗೆ ತಿಳಿದಿರುವುದಿಲ್ಲ. ಈ ಬಗ್ಗೆ ದಿನಾಂಕ 28.05.2023 ರಂದು ನನಗೆ ನಿಪಿ.28 ರಂತೆ ವಾಹನದ ದಾಖಾಲಾತಿಗಳನ್ನು ಕೋರಿ ಪೊಲೀಸರು ನೋಟೀಸ್ ನೀಡಿರುತ್ತಾರೆ ಎಂದರೆ ಸರಿ ಮತ್ತು ದಿ.28.05.2023 ರಂದು

ಸದರಿ ನೋಟೀಸ್ ಗೆ ಸಂಬಂಧಿಸಿದಂತೆ ದಾಖಲಾತಿಗಳನ್ನು ಹಾಜರು ಪಡಿಸಲಾಗಿರುತ್ತದೆ. ಸಾಕ್ಷಿಯು ಮುಂದುವರೆದು ಇದಕ್ಕೆ ಸಂಬಂಧಿಸಿದಂತೆ ಎಲ್ಲಾ ಕೆಲಸವನ್ನು ನಮ್ಮ ಮ್ಯಾನೇಜರ್ ನೋಡಿಕೊಂಡಿರುತ್ತಾರೆ ಎಂದು ನುಡಿಯುತ್ತಾರೆ. ಸಾಕ್ಷಿಯ ಹೇಳಿಕೆಯ ಭಾಗವನ್ನು ನಿಪಿ.31 ಎಂದು ಗುರುತಿಸಲಾಯಿತು. ಆರೋಪಿಯು ನಮ್ಮ ಕಂಪನಿಯ ಕೆಲಸಗಾರನಾದ ಕಾರಣ ಅವರಿಗೆಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಈ ಪ್ರಕರಣಕ್ಕೆ ಕುರಿತಂತೆ ನಾನು ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

**ಪಾಟೀ ಸವಾಲು: ಆರೋಪಿ ಪರ ಶ್ರೀ ಕೆ ಎ ಎಂ. ವಕೀಲರಿಂದ**

ಪೊಲೀಸರು ನನ್ನ ಬಳಿ ಖಾಲಿ ಹಾಳೆಗೆ ಸಹಿ ಮಾಡಿಸಿರುತ್ತಾರೆ ಎಂದರೆ ಸರಿ. ಪೊಲೀಸರು ನನ್ನ ಸಹಿಯನ್ನು ನನ್ನ ಮನೆಯಲ್ಲಿ ಪಡೆದುಕೊಂಡಿರುತ್ತಾರೆ .

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಾಕ್ಷಿ ಸಹಿಃ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.